ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

7

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 25/9/20

**ಸಭಾನಾಯಕ ಕೋಟ ಶ್ರೀನಿವಾಸ ಪೂಜಾರಿ**

# ಗಂಗಾ ಕಲ್ಯಾಣ: ತನಿಖೆಗೆ ಸದನ ಸಮಿತಿ

ಪ್ರಜಾವಾಣಿ ವಾರ್ತೆ 24-9-20

> ಸಮಿತಿ ರಚನೆ ಬಗ್ಗೆ ಸಮಾಜ ಕಲ್ಯಾಣ ಸಚಿವ ಗೋವಿಂದ ಕಾರಜೋಳ ಜೊತೆ ಚರ್ಚಿಸುತ್ತೇನೆ. ಬಳಿಕ, ಸಮಿತಿಯಲ್ಲಿ ಯಾರೆಲ್ಲ ಇರಬೇಕು ಎಂಬ ಬಗ್ಗೆ ಸಭಾಪತಿಯವರ ಉಪಸ್ಥಿತಿಯಲ್ಲಿ ತೀರ್ಮಾನಿಸಲಾಗುವುದು.
>
> **ಕೋಟ ಶ್ರೀನಿವಾಸ ಪೂಜಾರಿ,** ಸಭಾನಾಯಕ

ಬೆಂಗಳೂರು: 'ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಸಮುದಾಯವರಿಗೆ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿ ಕೊರೆದ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರದ ತನಿಖೆಗೆ ಸದನ ಸಮಿತಿ ರಚಿಸಲು ಸರ್ಕಾರ ಸಿದ್ಧವಿದೆ' ಎಂದು ಸಭಾನಾಯಕ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು.

ವಿಧಾನ ಪರಿಷತ್‌ನಲ್ಲಿ ಬಿಜೆಪಿಯ ವೈ.ಎ. ನಾರಾಯಣಸ್ವಾಮಿ, ಈ ಯೋಜನೆಯಡಿ ಭಾರೀ ಅವ್ಯವಹಾರ ನಡೆದಿದ್ದು ಸದನ ಸಮಿತಿ ರಚಿಸುವಂತೆ ಆಗ್ರಹಿಸಿದರು. ಪಕ್ಷಾತೀತವಾಗಿ ಎಲ್ಲ ಸದಸ್ಯರು ಬೆಂಬಲ ಸೂಚಿಸಿದರು.

ನಾರಾಯಣಸ್ವಾಮಿ ಮಾತನಾಡಿ, ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿರುವ ಅಂಬೇಡ್ಕರ್, ಮಹರ್ಷಿ ವಾಲ್ಮೀಕಿ, ಬಂಜಾರ ಹೀಗೆ ವಿವಿಧ ಅಭಿವೃದ್ಧಿ ನಿಗಮಗಳ ಸಹಾಯಧನದಲ್ಲಿ 2016ರ–19ರ ಅವಧಿಯಲ್ಲಿ 31,735 ಕೊಳವೆ ಬಾವಿ ಕೊರೆಯಲಾಗಿದೆ. ಶಾಸಕರ ನೇತೃತ್ವದ ಸಮಿತಿಯ ಕೋಟಾ ಅಡಿ ಶೇ 80, ಉಳಿದ ಶೇ 20ರಲ್ಲಿ, ಶೇ 15ರಷ್ಟು ಸಚಿವರಿಗೆ, ಶೇ 5ರಷ್ಟು ಮಂಡಳಿಗಳ ವಿವೇಚಾನಾಧಿಕಾರಕ್ಕೆ ನೀಡಲಾಗಿದೆ. ಆದರೆ, ಟೆಂಡರ್ ಕರೆಯದೆ ಕಾಮಗಾರಿಗೆ ಪರವಾನಗಿ ನೀಡಲಾಗಿದೆ. ಬೋಗಸ್ ಬಿಲ್ ನೀಡಿ ಹಣ ಲೂಟಿ ಮಾಡಲಾಗಿದೆ' ಎಂದರು.

ಯೋಜನೆಯಲ್ಲಿ ನಡೆದ ಅಕ್ರಮಗಳನ್ನು ಸದಸ್ಯರಾದ ಅಪ್ಪಾಜಿ ಗೌಡ, ಬಸವರಾಜ ಇಟಗಿ, ಪ್ರಕಾಶ್ ರಾಥೋಡ್, ಮಹಂತೇಶ ಕವಟಗಿಮಠ, ಮರಿತಿಬ್ಬೇಗೌಡ, ರವಿಕುಮಾರ್, ತೇಜಸ್ವಿನಿ ಗೌಡ, ಸುನೀಲ್ ವಲ್ಯಾಪುರೆ, ಧರ್ಮಸೇನಾ, ನಜೀರ್ ಅಹಮದ್ ಹೀಗೆ ಎಲ್ಲ ಸದಸ್ಯರು ವಿವರಿಸಿದರು.

ವಿರೋಧ ಪಕ್ಷದ ನಾಯಕ ಎಸ್. ಆರ್. ಪಾಟೀಲ, 'ಈ ಮೋಸ ಅಕ್ಷಮ್ಯ. ಮಟ್ಟ ಹಾಕಲೇಬೇಕು. ಸದನ ಸಮಿತಿ ಮೂಲಕ ವ್ಯವಹಾರದ ತನಿಖೆ ಆಗಲಿ' ಎಂದರು.